**S. SURESHKUMAR**
Minister for Primary &
Secondary Education and
Sakala

Telephone Off : 080-22253631
Internal: 22033897
Room No. 262 & 262A
2nd Floor, Vidhana Soudha
Bengaluru - 560 001
E-mail : nimmasuresh.2019@gmail.com

No. P.S.E.S.M./ 9856 /2019-20

Date: 07/12/2020

**ಟಿಪ್ಪಣಿ**

ದಿನಾಂಕ: 02-12-2020ರಂದು ಪದವೀಧರ ಮತ್ತು ಶಿಕ್ಷಕ ಕ್ಷೇತ್ರದ ವಿಧಾನಪರಿಷತ್ ಸದಸ್ಯರುಗಳೊಂದಿಗೆ ನಡೆದ ಚರ್ಚಾ ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ತುರ್ತು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಸೂಚಿಸಲಾಗಿದೆ.

1. ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ತರಗತಿಗಳನ್ನು ಪ್ರಾರಂಭಿಸಬೇಕೆಂದು ಸಭೆಯಲ್ಲಿ ಭಾಗವಹಿಸಿದ್ದ ಎಲ್ಲ ಸದಸ್ಯರು ಒಕ್ಕೊರಲಿನಿಂದ ಆಗ್ರಹಿಸಿದ್ದು, ದಿನಾಂಕ: 23-11-2020ರಂದು ಮುಖ್ಯಮಂತ್ರಿಗಳ ಅಧ್ಯಕ್ಷತೆಯ ಸಭೆಯಲ್ಲಿ ಚರ್ಚಿಸಲಾದಂತೆ ಈ ಮಾಸಾಂತ್ಯಕ್ಕೆ ಸಭೆ ಏರ್ಪಡಿಸಲು ದಿನಾಂಕವನ್ನು ನಿಗದಿಪಡಿಸಲು ಕ್ರಮ ವಹಿಸುವುದು.

2. ವಿದ್ಯಾಗಮ ಕಾರ್ಯಕ್ರಮವನ್ನು ಪುನರಾರಂಭಿಸುವ ಬಗ್ಗೆ ರೂಪುರೇಷೆಗಳನ್ನು ಸಿದ್ಧಪಡಿಸಿ ಕಡತದಲ್ಲಿ ಮಂಡಿಸುವುದು.

3. ಸಿಆರ್‌ಪಿ ಮತ್ತು ಬಿಆರ್‌ಪಿಗಳಿಗೆ ಈ ಸಾಲಿನ ವರ್ಗಾವಣೆಯಲ್ಲಿ ಅರ್ಜಿ ಸಲ್ಲಿಕೆಗೆ ಅವಕಾಶ ಕಲ್ಪಿಸುವುದು. ಕಳೆದ ಶೈಕ್ಷಣಿಕ ಸಾಲಿನಲ್ಲಿ ಯಾವುದೇ ಪ್ರೌಢಶಾಲಾ ಮುಖ್ಯೋಪಾಧ್ಯಾಯರು ಕಡ್ಡಾಯ ವರ್ಗಾವಣೆಗೊಳಗಾಗಿದ್ದಲ್ಲಿ ಅವರಿಗೂ ಸಹ ಈ ಬಾರಿ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸುವುದು.

4. ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರುಗಳಿಗೆ ನೀಡಲಾದ ಎಲ್ಲ ವಿಶೇಷ ಭತ್ಯೆಗಳನ್ನು ವಸೂಲಾತಿ ಮಾಡುವಲ್ಲಿ ಸಿ ಮತ್ತು ಡಿ ಗುಂಪಿಗೆ ಸೇರಿದ ನೌಕರರಿಂದ ವಸೂಲಾತಿ ಮಾಡಬಾರದೆಂಬ ಸುಪ್ರಿಂ ಕೋರ್ಟಿನ ತೀರ್ಪಿನ ಹಿನ್ನೆಲೆಯಲ್ಲಿ ಪರಾಮರ್ಶಿಸಿ ಮಂಡಿಸುವುದು. ನ್ಯಾಯಾಲಯದ ಆದೇಶವನ್ನು ಸಂಪೂರ್ಣವಾಗಿ ಪರಿಶೀಲಿಸಿ ನಿರ್ಣಯವನ್ನು ತೆಗೆದುಕೊಳ್ಳುವವರೆಗೆ ವಸೂಲಾತಿ ಪ್ರಕ್ರಿಯೆಯನ್ನು ತಡೆಹಿಡಿಯಲು ಅಗತ್ಯ ಕ್ರಮ ವಹಿಸುವುದು.

5. ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಹೊಸದಾಗಿ ನೇಮಕಗೊಂಡ ಸೇವಾ ನಿರತ ಪದವಿ ಪೂರ್ವ ಶಿಕ್ಷಣ ಉಪನ್ಯಾಸಕ ಅಭ್ಯರ್ಥಿಗಳ ಪೈಕಿ ಹಲವು ಅಭ್ಯರ್ಥಿಗಳು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರಗಳನ್ನು ನೀಡಬೇಕೆಂದು ಆಗ್ರಹಿಸುತ್ತಿದ್ದು, ಕೂಡಲೇ ಈ ಬಗ್ಗೆ ಕ್ರಮ ವಹಿಸುವುದು.

6. ಆರ್ಥಿಕ ಮಿತವ್ಯಯದ ಹಿನ್ನೆಲೆಯಲ್ಲಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನೇಮಕಾತಿ ಸ್ಥಗಿತಗೊಂಡಿದ್ದು, ಈ ಸಮಸ್ಯೆಯನ್ನು ಪರಿಹರಿಸುವ ಸಲುವಾಗಿ ಕೂಡಲೇ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸುವುದು.

(ಎಸ್. ಸುರೇಶ್ ಕುಮಾರ್)

**ಸರ್ಕಾರದ ಪ್ರಧಾನ ಕಾರ್ಯದರ್ಶಿ**
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ

**ನಿರ್ದೇಶಕರು**
ಪದವಿ ಪೂರ್ವ ಶಿಕ್ಷಣ ಇಲಾಖೆ

**ಆಯುಕ್ತರು,**
ಸಾರ್ವಜನಿಕ ಶಿಕ್ಷಣ ಇಲಾಖೆ